ಶುಶ್ರೂಷಕರನ್ನು ಖಾಯಂಗೊಳಿಸುವುದು

276 (2976), ಶ್ರೀ ರವಿ ಸಿ.ಟಿ. (ಚಿಕ್ಕಮಗಳೂರು)

ಅ) ಸರ್ಕಾರಿ ಆಸ್ಪತ್ರೆಗಳಲ್ಲಿ ಗುತ್ತಿಗೆ ಆಧಾರದಲ್ಲಿ ನೇಮಕವಾಗಿ ಕೆಲಸ ನಿರ್ವಹಿಸುತ್ತಿರುವ ಶುಶ್ರೂಷಕರನ್ನು ಖಾಯಂಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಸರ್ಕಾರಿ ಆಸ್ಪತ್ರೆಗಳಲ್ಲಿ ರಾತ್ರಿ ಪಾಳಿಯಲ್ಲಿ ಕೆಲಸ ನಿರ್ವಹಿಸುವ ಸಿಬ್ಬಂದಿಗಳಿಗೆ ರಾತ್ರಿ ಪಾಳಿಯ ಭತ್ಯೆ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಇ) ಸರ್ಕಾರಿ ಆಸ್ಪತ್ರೆಗಳಲ್ಲಿ ಅತ್ಯುತ್ತಮವಾಗಿ ಕೆಲಸ ನಿರ್ವಹಿಸುವ ಸಿಬ್ಬಂದಿಗಳನ್ನು ಗುರುತಿಸಿ ಅವರುಗಳಿಗೆ ಪ್ರಶಸ್ತಿ ನೀಡಿ, ಸಿಬ್ಬಂದಿಗಳ ಮನೋಸ್ಥೈರ್ಯ ಹೆಚ್ಚಿಸುವ ಯಾವುದಾದರೂ ಕಾರ್ಯಕ್ರಮಗಳನ್ನು ಸರ್ಕಾರ ಹಮ್ಮಿಕೊಂಡಿದೆಯೇ?

ಶ್ರೀ ಯು.ಟಿ.ಖಾದರ್ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಕಿರಿಯ ಆರೋಗ್ಯ ಸಹಾಯಕರ ಹುದ್ದೆಗೆ ನೇಮಕಗೊಂಡು ತದನಂತರ ಶುಶ್ರೂಕರಾಗಿ ಕರ್ತವ್ಯ ನಿರ್ವಹಿಸುತ್ತಿರುವ (ರಾಜ್ಯವಲಯ) ಹಾಗೂ ಆರ್.ಸಿ.ಹೆಚ್. ಅಡಿಯಲ್ಲಿ (ರಾಜ್ಯ ವಲಯದಿಂದ) ಗುತ್ತಿಗೆ ಆಧಾರದ ಮೇಲೆ ನೇಮಕಗೊಂಡು ಶುಶ್ರೂಷಕರಾಗಿ ಸುಮಾರು 10 ವರ್ಷಗಳಿಂದ ಕೆಲಸ ನಿರ್ವಹಿಸುತ್ತಿರುವ ನರ್ಸ್‌ಗಳನ್ನು ಅರ್ಹತೆ ಮತ್ತು ಜೇಷ್ಠತೆ ಆಧಾರದ ಮೇಲೆ ಪರಿಗಣಿಸಿ, ಅವರುಗಳನ್ನು ಖಾಯಂಗೊಳಿಸುವ ವಿಷಯ ಸರ್ಕಾರದ ಪರಿಶೀಲನೆಯಲ್ಲಿದೆ.

ಆ) ಇಲ್ಲ.

ಇ) ಹೌದು.

ಸರ್ಕಾರಿ ಕಛೇರಿಗಳಲ್ಲಿ ಅತ್ಯುತ್ತಮವಾಗಿ ಕೆಲಸ ನಿರ್ವಹಿಸುವ ಅಧಿಕಾರಿ/ಸಿಬ್ಬಂದಿಗಳನ್ನು ಗುರುತಿಸಿ, ಆಯಾ ಜಿಲ್ಲೆಗಳಲ್ಲಿ ಪ್ರತಿ ವರ್ಷ ಗ್ರೂಪ್ "ಎ" "ಬಿ" "ಸಿ" ಮತ್ತು "ಡಿ" ವೃಂದದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರಿಗೆ ಸರ್ವೋತ್ತಮ ಸೇವಾ ಪ್ರಶಸ್ತಿ ನೀಡಿ, ಸಿಬ್ಬಂದಿಗಳ ಮನೋಸ್ಥೈರ್ಯ ಹೆಚ್ಚಿಸಲಾಗುತ್ತಿದೆ.

ಹೆಚ್ಚುವರಿ ವಿದ್ಯಾರ್ಥಿ ನಿಲಯಗಳು

277 (1194), ಶ್ರೀ ರೇವಣ್ಣ ಹೆಚ್.ಡಿ. (ಹೊಳೆನರಸೀಪುರ)

ಅ) ಹಾಸನ ಜಿಲ್ಲೆಯಲ್ಲಿ ಪ್ರತಿ ವರ್ಷ 7 ರಿಂದ 8 ಸಾವಿರ ಗ್ರಾಮೀಣ ವಿದ್ಯಾರ್ಥಿಗಳು ಪದವಿಪೂರ್ವ ಶಿಕ್ಷಣ ಮತ್ತು ಪದವಿ ಶಿಕ್ಷಣ ಪಡೆಯುತ್ತಿದ್ದು ಸದರಿ ವಿದ್ಯಾರ್ಥಿಗಳಲ್ಲಿ ಬಹಳಷ್ಟು ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ನಿಲಯದ ಸೌಕರ್ಯ ದೊರಕದೆ ಇರುವುದು ಸರ್ಕಾದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ವಿದ್ಯಾರ್ಥಿಗಳಿಗೆ ಸಮರ್ಪಕ ವಿದ್ಯಾಭ್ಯಾಸ ದೊರಕುವಂತೆ ಮಾಡಲು ವಿದ್ಯಾರ್ಥಿ ನಿಲಯಗಳಲ್ಲಿ ಸಂಖ್ಯಾಬಲವನ್ನು ಹೆಚ್ಚಿಸಲು ಹೊಸದಾಗಿ ವಿದ್ಯಾರ್ಥಿ ನಿಲಯಗಳನ್ನು ಪ್ರಾರಂಭಿಸಲು ಸರ್ಕಾರವು ತೆಗೆದುಕೊಂಡ ಕ್ರಮವೇನು?

ಶ್ರೀ ಹೆಚ್.ಆಂಜನೇಯ (ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ಸಚಿವರು)

ಅ) ಹಾಸನ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ 12 ಬಾಲಕರ 11 ಬಾಲಕಿಯರ ಒಟ್ಟು 23 ಮೆಟ್ರಿಕ್ ನಂತರ ವಿದ್ಯಾರ್ಥಿ ನಿಲಯಗಳನ್ನು ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 19 ಬಾಲಕರ ಮತ್ತು 16 ಬಾಲಕಿಯರ ಒಟ್ಟು 35 ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳನ್ನು ನಡೆಸಲಾಗುತ್ತಿದೆ.